ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	539
ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಡಾ. ವೈ.ಎ. ನಾರಾಯಣಸ್ವಾಮಿ
ಉತ್ತರಿಸಬೇಕಾದ ದಿನಾಂಕ	:	05.02.2021
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ವತಿಯಿಂದ ಹಿರಿಯ ನಾಗರೀಕರ ಅನುಕೂಲಕ್ಕಾಗಿ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳು ಯಾವುವು; (ವಿವರ ನೀಡುವುದು)	ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಇಲಾಖಾ ವತಿಯಿಂದ ಜಾರಿಗೊಳಿಸಿರುವ ಯೋಜನೆಗಳ ವಿವರಗಳನ್ನು ಅನುಬಂಧ–01ರಲ್ಲಿ ಒದಗಿಸಿದೆ.
ಆ)	ಕಳೆದ 3 ವರ್ಷಗಳಲ್ಲಿ ಈ ಯೋಜನೆಗಳಿಗಾಗಿ ವೆಚ್ಚ ಮಾಡಿರುವ ಹಣ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)	ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಇಲಾಖಾ ವತಿಯಿಂದ ಜಾರಿಗೊಳಿಸಿರುವ ಯೋಜನೆಗಳಿಗೆ ಕಳೆದ 3 ವರ್ಷಗಳಲ್ಲಿ ವೆಚ್ಚ ಮಾಡಿರುವ ವಿವರಗಳನ್ನು ಅನುಬಂಧ–02ರಲ್ಲಿ ಒದಗಿಸಿದೆ.

ಸಂಖ್ಯೆ: ಮಮಇ 45 ಪಿಹೆಚ್‌ಪಿ 2021

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ
ಇಲಾಖೆ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ವೈ.ಎ. ನಾರಾಯಣಸ್ವಾಮಿ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ:539ಕ್ಕೆ

ಅನುಬಂಧ–01

ಹಿರಿಯ ನಾಗರಿಕರಿಗಾಗಿ ಜಾರಿಗೊಳಿಸುತ್ತಿರುವ ಯೋಜನೆಗಳು

1. ಹಗಲು ಯೋಗಕ್ಷೇಮ ಕೇಂದ್ರಗಳು:

ರಾಜ್ಯದ 30 ಜಿಲ್ಲೆಗಳಿಗೆ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರದ ಮಂಜೂರಾತಿ ದೊರೆತಿದ್ದು, ಪ್ರತಿ ಕೇಂದ್ರದಲ್ಲಿ ಸುಮಾರು 50–150 ಫಲಾನುಭವಿಗಳಿಗೆ ಅವಕಾಶ ಕಲ್ಪಿಸಿಕೊಡಲಾಗಿದ್ದು, ಸದರಿ ಯೋಜನೆಗೆ ಸರ್ಕಾರದಿಂದ ವಾರ್ಷಿಕ ರೂ.11.20 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗುತ್ತದೆ.

2. ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು:

ಹಿರಿಯ ನಾಗರಿಕರು ಕಿರುಕುಳ, ಹಣಕಾಸಿನ ಶೋಷಣೆ, ಮಾನಸಿಕ ತುಮುಲ ಮತ್ತು ದುರ್ಬಲರಾಗಿ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದು, ಇಂತಹ ಸಮಸ್ಯೆಗಳ ನಿವಾರಣೆಗಾಗಿ ಹಾಗೂ ತುರ್ತು ಸಹಾಯಕ್ಕಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳನ್ನು ರಾಜ್ಯದ 30 ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 28 ಜಿಲ್ಲೆಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿ ಆವರಣದಲ್ಲಿ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಿಂದ ನಡೆಸಲಾಗುತ್ತಿದೆ.

3. ಹಿರಿಯ ನಾಗರಿಕರ ವೃದ್ಧಾಶ್ರಮ:

ರಾಜ್ಯದ 30 ಜಿಲ್ಲೆಗಳಲ್ಲಿ ನಿರ್ಗತಿಕ ಹಿರಿಯ ನಾಗರಿಕರಿಗಾಗಿ ವೃದ್ಧಾಶ್ರಮಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸಲಾಗುತ್ತಿದ್ದು, ಈ ವೃದ್ಧಾಶ್ರಮದಲ್ಲಿ 25 ನಿರ್ಗತಿಕ ಹಿರಿಯ ನಾಗರಿಕರನ್ನು ದಾಖಲಿಸಿಕೊಳ್ಳಲು ಅವಕಾಶವಿದ್ದು, ಒಂದು ವೃದ್ಧಾಶ್ರಮದ ನಿರ್ವಹಣೆಗಾಗಿ ವಾರ್ಷಿಕ ರೂ.8.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದ್ದು, ಇದರಲ್ಲಿ ಸಿಬ್ಬಂದಿ ವೆಚ್ಚ, ನಿರ್ವಹಣಾ ವೆಚ್ಚ, ಔಷಧಿ, ಕಟ್ಟಡ ಬಾಡಿಗೆ, ವೃತ್ತ ಪತ್ರಿಕೆ ಹಾಗೂ ಇತರೆ ವೆಚ್ಚಗಳಿಗಾಗಿ ಒಟ್ಟು ಯೋಜನಾ ವೆಚ್ಚದ ಶೇ.90ರಷ್ಟು ಅನುದಾನವನ್ನು ಸ್ವಯಂ ಸೇವಾ ಸಂಸ್ಥೆಗಳಿಗೆ ನೀಡಲಾಗುತ್ತಿದ್ದು ಉಳಿದ ಶೇ.10ರಷ್ಟನ್ನು ಸಂಸ್ಥೆಯು ಭರಿಸಬೇಕಾಗುತ್ತದೆ. ಅನುದಾನವನ್ನು ಜಿಲ್ಲಾ ಪಂಚಾಯತ್, ಮೂಲಕ ಮಂಜೂರು ಮಾಡಲಾಗುತ್ತಿದೆ.

ರಾಜ್ಯದ ಪ್ರತಿ ಕಂದಾಯ ಉಪ ವಿಭಾಗದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವೃದ್ಧಾಶ್ರಮಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 8 ಕಂದಾಯ ಉಪ ವಿಭಾಗಕ್ಕೆ ವೃದ್ಧಾಶ್ರಮ ನಡೆಸಲು ಆಡಳಿತಾತ್ಮಕ ಮಂಜೂರಾತಿ ದೊರೆತಿರುತ್ತದೆ.

4. ಹಿರಿಯ ನಾಗರಿಕರಿಗೆ ಗುರುತಿನ ಚೀಟಿಗಳು:

60 ವರ್ಷ ಮೇಲ್ಪಟ್ಟ ವಯೋಮಾನದ ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯಲು ಸೇವಾ ಸಿಂಧು ಆನ್‌ಲೈನ್ ತಂತ್ರಾಂಶವನ್ನು ಅಭಿವೃದ್ಧಿ ಪಡಿಸಲಾಗಿದ್ದು, ದಿ:01.10.2018ರಿಂದ ಹಿರಿಯ ನಾಗರಿಕರು ಸೇವಾ ಸಿಂಧು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಹಿರಿಯ ನಾಗರಿಕರ ಗುರುತಿನ ಚೀಟಿಯನ್ನು ಪಡೆಯಬಹುದಾಗಿದೆ.

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ. ವೈ.ಎ. ನಾರಾಯಣಸ್ವಾಮಿ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ:539ಕ್ಕೆ

ಅನುಬಂಧ-02

		2017-18			2018-19			2019-20		
ಕ್ರ.ಸಂ	ಜಿಲ್ಲೆಯ ಹೆಸರು	ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ	ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ	ವೃದ್ಧಾಶ್ರಮ	ಹಿರಿಯ ನಾಗರಿಕರ ಸಹಾಯ ವಾಣಿ ಕೇಂದ್ರ	ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ	ವೃದ್ಧಾಶ್ರಮ	ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ	ಹಿರಿಯ ನಾಗರಿಕರ ಹಗಲು ಯೋಗಕ್ಷೇಮ ಕೇಂದ್ರ	ವೃದ್ಧಾಶ್ರಮ
1	ಬೆಂಗಳೂರು (ನ)	6.16	20.33	16.00	7.15	19.53	25.03	6.15	14.97	0.00
2	ಬೆಂಗಳೂರು (ಗ್ರಾ)	3.08	7.25	0.00	8.13	7.34	0.00	5.25	1.84	0.00
3	ಬೆಳಗಾವಿ	0.00	9.84	7.64	1.31	9.85	7.72	0.00	8.30	7.73
4	ಬಳ್ಳಾರಿ	6.16	9.85	8.00	6.15	10.80	6.67	6.15	9.84	8.00
5	ಬೀದರ್	6.14	0.00	8.00	6.15	0.00	8.00	6.15	0.00	8.00
6	ವಿಜಯಪುರ	10.27	9.84	8.00	5.99	9.85	8.00	6.15	9.85	8.00
7	ಬಾಗಲಕೋಟೆ	6.15	0.00	7.54	6.14	9.00	0.00	6.15	9.80	7.40
8	ಚಿತ್ರದುರ್ಗ	5.76	9.85	0.00	6.16	9.85	0.00	5.72	9.78	0.00
9	ಚಿಕ್ಕಮಗಳೂರು	9.22	9.84	8.00	6.16	9.85	7.99	3.08	4.92	8.00
10	ಚಾಮರಾಜನಗರ	6.16	7.39	0.00	6.16	9.85	0.00	6.15	9.84	0.00
11	ಧಾರವಾಡ	6.00	9.85	8.00	6.00	9.85	8.00	6.16	9.76	8.00
12	ದಕ್ಷಿಣ ಕನ್ನಡ	6.15	0.00	16.00	6.05	0.00	7.99	3.03	0.00	8.00
13	ದಾವಣಗೆರೆ	6.14	8.24	0.00	6.14	9.03	0.00	6.10	4.52	0.00
14	ಕಲಬುರಗಿ	0.00	9.84	9.47	0.00	9.84	0.00	0.00	9.84	8.00
15	ಗದಗ	6.14	10.02	4.46	6.15	9.24	7.40	6.16	9.84	0.00
16	ಹಾಸನ	6.15	9.85	8.00	6.13	9.53	8.00	5.94	9.60	8.00
17	ಹಾವೇರಿ	3.08	4.92	8.00	6.16	9.84	8.00	0.00	9.84	8.00
18	ಕೊಡಗು	5.50	8.41	8.00	6.10	9.85	7.99	6.15	9.48	8.00
19	ಕೋಲಾರ	6.15	0.00	0.00	5.94	0.00	7.99	3.02	0.00	8.00
20	ಕೊಪ್ಪಳ	6.16	9.85	7.92	6.03	9.44	7.92	6.09	9.74	8.00
21	ಮೈಸೂರು	5.65	9.84	8.00	5.49	9.85	8.00	6.03	9.85	8.00
22	ಮಂಡ್ಯ	6.15	11.20	8.00	6.16	9.85	8.00	6.14	9.85	8.00
23	ರಾಯಚೂರು	6.14	9.84	0.00	6.18	9.50	0.00	3.04	4.75	0.00
24	ಶಿವಮೊಗ್ಗ	6.06	9.48	8.00	6.15	2.36	7.99	6.15	0.00	8.00
25	ತುಮಕೂರು	6.16	0.00	8.00	6.16	0.00	7.99	6.15	0.00	8.00
26	ಉತ್ತರಕನ್ನಡ	6.15	9.85	0.00	6.15	9.82	0.00	6.15	9.84	0.00
27	ಉಡುಪಿ	5.22	0.00	0.00	5.00	0.00	0.00	2.38	0.00	0.00
28	ರಾಮನಗರ	6.16	0.00	8.00	6.16	0.00	7.99	3.08	0.00	8.00
29	ಚಿಕ್ಕಬಳ್ಳಾಪುರ	6.16	9.85	6.40	6.16	9.85	7.99	6.16	9.85	8.00
30	ಯಾದಗಿರಿ	6.16	9.84	8.00	6.16	9.85	7.99	6.16	9.84	8.00
	ಒಟ್ಟು	170.58	225.07	187.43	174.11	233.60	182.65	145.04	205.74	167.13